# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್ 177(145) ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರಾದ ಶ್ರೀ. ಮಹಾಂತೇಶ್ ಬುರನಾಮರ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ಮತ್ತು ನೋಡಲ್ ಅಧಿಕಾರಿ ಅಪ್ಪಣೆ ಮೇರೆಗೆ ದಿನಾಂಕ:03/12/2022ರ ಶನಿವಾರದಂದು ಬೆಳಗ್ಗೆ 10.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:-**

1. ಶ್ರೀ. ಮಹಾಂತೇಶ್ ಬುರನಾಮರ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ಮತ್ತು ನೋಡಲ್ ಅಧಿಕಾರಿ.
2. ಶ್ರೀ. ವಿಜಯಕುಮಾರ್ ಕೆ.ಎಸ್. ಸಹಾಯಕ ಅಭಿಯಂತರರು ವಾರ್ಡ್-177.
3. ಶ್ರೀ. ಆರ್. ಉಮಾಶಂಕರ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-177.
4. ಕುಮಾರಿ. ರುಚಿತಾ, ಸಹಾಯಕ ಅಭಿಯಂತರರು (ಹೊರಗುತ್ತಿಗೆ) ವಾರ್ಡ್ 177(145).
5. ಶ್ರೀ. ಸುರೇಶ್, ನೌಕರರು ಪಶು ಸಂಗೋಪನಾ ಇಲಾಖೆ.
6. ಶ್ರೀಮತಿ. ಭೂದೇವಿ, ತೋಟಗಾರಿಕೆ ಪರಿವೀಕ್ಷಕರು.
7. ವಾರ್ಡಿನ ಸ್ಥಳೀಯರಾದ ಶ್ರೀ. ಪಿ. ದಯಾನಂದ, ಶ್ರೀ. ಪದ್ಮನಾಭ, ಶ್ರೀ. ಹೆಚ್. ಪ್ರಭಾಕರ್ ಶ್ರೀ. ಪ್ರಶಾಂತ್ ಹಾಗೂ ಶ್ರೀ. ಸುಭಾಷ್‌ಚಂದ್ರ.

**ಸಭೆಗೆ ಗೈರು ಹಾಜರಾದ ಇಲಾಖೆಗಳು:-**

1. ಪೊಲೀಸ್ ಇಲಾಖೆ ಅಧಿಕಾರಿಗಳು ಕಾನೂನು ಸುವ್ಯವಸ್ಥೆ ಆಡುಗೋಡಿ.
2. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ & ಸಂಚಾರ ವಾರ್ಡ್ 177.
3. ಸಹಾಯಕ ಇಂಜಿನಿಯರ್ (ಬೆಸ್ಕಾಂ).
4. ಅರಣ್ಯ ಇಲಾಖೆಯ ಅಧಿಕಾರಿಗಳು.
5. ತೋಟಗಾರಿಕೆ ಇಲಾಖೆ, ಮೇಲ್ವಿಚಾರಕರು ವಾರ್ಡ್ 177.
6. ಸಹಾಯಕ ಇಂಜಿನಿಯರ್ (BWSSB).
7. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
8. ಸ.ಕಾ.ನಿ. ಅಭಿಯಂತರರು, ಯೋಜನೆ-ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ.



Scanned with CamScanner

9. ಸ.ಕಾ.ನಿ. ಅಭಿಯಂತರರು, ಬೃಹತ್ ನೀರುಗಾಲುವೆ ಬಿಬಿಎಂಪಿ ಜಯನಗರ ವಾಣಿಜ್ಯ ಸಂಕೀರ್ಣ ಕಟ್ಟಡ.
10. ಸಹಾಯಕ ನಿರ್ದೇಶಕರು, ಪಶು ಸಂಗೋಪನಾ ಇಲಾಖೆ, ದಾಸಪ್ಪ ಆಸ್ಪತ್ರೆ, ಬಿಬಿಎಂಪಿ. ಬೆಂಗಳೂರು.
11. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬಿ.ಎಂ.ಟಿ.ಸಿ ಕೇಂದ್ರ ಕಛೇರಿ, ಕೆಂಗಲ್ ಹನುಮಂತಯ್ಯ ರಸ್ತೆ. ಶಾಂತಿನಗರ, ಬೆಂಗಳೂರು

1. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ಕಮಿಟಿ ಸಭೆಗೆ ಆರೋಗ್ಯ ವೈದ್ಯಾಧಿಕಾರಿಗಳು ಹಾಜರಾಗಬೇಕೆಂದು ಕೋರಿದರು. ಒಂದು ವೇಳೆ ಹಾಜರಾಗದ ಪಕ್ಷದಲ್ಲಿ ನ್ಯಾಯಾಲಯದ ಮುಖಾಂತರ ಪ್ರಕರಣ ದಾಖಲಿಸುವುದಾಗಿಯೂ ಸಹ ತಿಳಿಸಿದರು.
2. ವಾರ್ಡಿನ ಸ್ಥಳೀಯರು ಮಾತನಾಡಿ ಲಕ್ಕಸಂದ್ರ 15ನೇ ಅಡ್ಡರಸ್ತೆಯ ಹತ್ತಿರ ಇರುವ ಸ್ಕೈವಾಕ್ ಅನ್ನು ಪೌರಕಾರ್ಮಿಕರು ಸ್ವಚ್ಛಗೊಳಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಅದರಂತೆ ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರು ಸ್ಕೈವಾಕ್‌ನ ಸ್ವಚ್ಛತೆ ಕಾಪಾಡುವುದಾಗಿ ಸಭೆಯಲ್ಲಿ ತಿಳಿಸಿದರು.
3. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಬಿದ್ದಿರುವ ರೆಂಬೆ ಕೊಂಬೆಗಳು ತೆರವುಗೊಳಿಸುವ ಬಗ್ಗೆ ಅರಣ್ಯ ಇಲಾಖೆಯವರು ಗಮನ ಹರಿಸಬೇಕೆಂದು ಸಭೆಯಲ್ಲಿ ತಿಳಿಸಿದರು.
4. ವಾರ್ಡಿನ ಸ್ಥಳೀಯರು ಮಾತನಾಡಿ ವಿಲ್ಸನ್‌ಗಾರ್ಡನ್ ರಾಣಿ ಪಾರ್ಕ್ ಹತ್ತಿರ ಪಾದಚಾರಿ ಮಾರ್ಗದಲ್ಲಿರುವ ಡೆಬ್ರಿಸ್‌ನ್ನು ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.
5. ವಾರ್ಡಿನ ಸ್ಥಳೀಯರು ಮಾತನಾಡಿ ಸಂಚಾರ ವಿಭಾಗದ ಜಂಟಿ ಆಯುಕ್ತರು ಅಥವಾ ಸಹಾಯಕ ಆಯುಕ್ತರು ಪೊಲೀಸ್ ರವರು ವಾರ್ಡ್ ಕಮಿಟಿ ಸಭೆಗೆ ಹಾಜರಾಗುವಂತೆ ಪತ್ರ ಬರೆಯಲು ಕೋರಿದರು.
6. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಕಸ ಸಂಗ್ರಹಣೆಗೆ ನಿರ್ದಿಷ್ಟವಾದ ಸಮಯವನ್ನು ತಿಳಿಸುವಂತೆ ಸಭೆಯಲ್ಲಿ ತಿಳಿಸಿರುತ್ತಾರೆ.
7. ವಾರ್ಡಿನ ಸ್ಥಳೀಯರು ಮಾತನಾಡಿ ಹೆಚ್.ಡಿ.ಡಿ ಕೇಬಲ್‌ಗಾಗಿ ಅಗೆದಿರುವ ರಸ್ತೆಯನ್ನು ಸಮರ್ಪಕವಾಗಿ ಮುಚ್ಚುವಂತೆ ಸಭೆಯಲ್ಲಿ ತಿಳಿಸಿದರು.



Scanned with CamScanner

8. ವಾರ್ಡಿನ ಸ್ಥಳೀಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ. ಕ್ಯಾಮರಾ ಅಳವಡಿಸುವ ಬಗ್ಗೆ ಸಭೆಯಲ್ಲಿ ತಿಳಿಸಿರುತ್ತಾರೆ.

9. ವಾರ್ಡಿನ ಸ್ಥಳೀಯರು ಮಾತನಾಡಿ ಬಿಟಿಎಸ್ ರಸ್ತೆಯಲ್ಲಿ ಫುಟ್‌ಪಾತ್ ವ್ಯಾಪಾರಿಗಳು ಹೆಚ್ಚಾಗಿದ್ದು ಇದರ ಬಗ್ಗೆ ಆರೋಗ್ಯ ವೈದ್ಯಾಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕೆಂದು ಸಭೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

| | |
|---|---|
| ಕಾರ್ಯದರ್ಶಿ & ಸಹಾಯಕ ಅಭಿಯಂತರರು<br>ವಾರ್ಡ್ ಸಂಖ್ಯೆ – 177(145)<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ಅಧ್ಯಕ್ಷರು & ನೋಡಲ್ ಅಧಿಕಾರಿ<br>ವಾರ್ಡ್ ಸಂಖ್ಯೆ – 177(145)<br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |



Scanned with CamScanner